# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 327+485+484

ಮಾನ್ಯ ಸದಸ್ಯರುಗಳ ಹೆಸರು : ಶ್ರೀಮತಿ ಭಾರತಿ ಶೆಟ್ಟಿ (ನಾಮ ನಿರ್ದೇಶಿತರು), ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) ಹಾಗೂ ಶ್ರೀ ಎಸ್.ವಿ. ಸಂಕನೂರ (ಪದವೀಧರರ ಕ್ಷೇತ್ರ)

ಉತ್ತರಿಸುವ ದಿನಾಂಕ : 10.12.2020

ಉತ್ತರಿಸುವವರು : ಮಾನ್ಯ ಮುಖ್ಯಮಂತ್ರಿಗಳು

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ನೂತನ ಪಿಂಚಣಿ ವ್ಯವಸ್ಥೆಯಲ್ಲಿ ಕೇಂದ್ರ ಸರ್ಕಾರ ಅನುಸರಿಸುತ್ತಿರುವ ನೀತಿ ಬಗ್ಗೆ ರಾಜ್ಯ ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; | ಹಳೆಯ ಪಿಂಚಣಿ ಯೋಜನೆಯ ಆರ್ಥಿಕ ಹೊರೆಯನ್ನು ನಿಭಾಯಿಸಲು ಸಾಕಷ್ಟು ನಿಧಿಯ ಆಧಾರ ಇಲ್ಲದಿರುವುದರಿಂದ ಹಾಗೂ ರಿಸರ್ವ್ ಬ್ಯಾಂಕ್‌ರವರು ರಚಿಸಿದ ಸಮಿತಿಯ ವರದಿಯ ಶಿಫಾರಸ್ಸಿನ ಆಧಾರದ ಮೇಲೆ ಕೇಂದ್ರ ಸರ್ಕಾರವು ನೂತನ ಪಿಂಚಣಿ ಯೋಜನೆಯನ್ನು ದಿನಾಂಕ: 01.01.2004 ರಿಂದ ಜಾರಿಗೊಳಿಸಿರುತ್ತದೆ. ಅದರಂತೆಯೇ ಇತರೆ ರಾಜ್ಯಗಳು ಈ ಯೋಜನೆಯನ್ನು ಅಳವಡಿಸಿಕೊಂಡ ಹಿನ್ನೆಲೆಯಲ್ಲಿ, ಕರ್ನಾಟಕ ರಾಜ್ಯವು ಕೂಡ ಸರ್ಕಾರದ ಆದೇಶ ಸಂಖ್ಯೆ: ಆಇ (ಎಸ್.ಪಿ.ಎಸ್.) 04 ಪಿಇಟಿ 2005, ದಿನಾಂಕ: 31.03.2006ರನ್ವಯ ದಿನಾಂಕ: 01.04.2006ರಂದು ಮತ್ತು ತದನಂತರ ಸರ್ಕಾರಿ ಸೇವೆಗೆ ಸೇರುವ ನೌಕರರಿಗೆ ನೂತನ ಪಿಂಚಣಿ ಯೋಜನೆಯನ್ನು ಜಾರಿಗೆ ತಂದಿದೆ. |
| ಆ) | ದೆಹಲಿ ಹೈಕೋರ್ಟ್ ತೀರ್ಪನ್ನು ರಾಜ್ಯ ಸರ್ಕಾರ ಯಾವ ರೀತಿಯಲ್ಲಿ ಜಾರಿಗೊಳಿಸುತ್ತದೆ? (ವಿವರ ಒದಗಿಸುವುದು).. | ನಿರ್ದಿಷ್ಟವಾದ ತೀರ್ಪಿನ ಉಲ್ಲೇಖವಿಲ್ಲದ ಕಾರಣ ಉತ್ತರವನ್ನು ನೀಡಲು ಸಾಧ್ಯವಿಲ್ಲ. |
| ಇ ) | ರಾಜ್ಯ ಸರ್ಕಾರಿ ನೌಕರರಿಗೆ ಹೊಸ ಪಿಂಚಣಿ ವ್ಯವಸ್ಥೆಯನ್ನು (ಎನ್.ಪಿ.ಎಸ್) ರದ್ದುಪಡಿಸಿ ಹಳೆ ಪಿಂಚಣಿ ವ್ಯವಸ್ಥೆಯನ್ನು ಜಾರಿ ತರುವ ದೃಷ್ಟಿಯಿಂದ ಅಧ್ಯಯನ ಸಮಿತಿಯನ್ನು ರಚಿಸಿರುವುದು ನಿಜವೇ; ಹಾಗಿದ್ದಲ್ಲಿ, ಸಮಿತಿಯು ಎಷ್ಟು ಬಾರಿ ಸಭೆ ಸೇರಿದೆ; ಹಾಗೂ ಸಮಿತಿಯು ಸರ್ಕಾರಕ್ಕೆ ತನ್ನ ಅಂತಿಮ ವರದಿಯನ್ನು ಸಲ್ಲಿಸಿದೆಯೇ; | ನೂತನ ಪಿಂಚಣಿ ಯೋಜನೆಗೆ ಸೂಕ್ತ ಬದಲಾವಣೆ/ಮಾರ್ಪಾಡು ಮಾಡಲು ಸರ್ಕಾರದ ಆದೇಶ ಸಂಖ್ಯೆ: ಆಇ 107 ಪಿಇಎನ್ 2018, ದಿನಾಂಕ: 11.12.2018 ರನ್ವಯ ಅಧಿಕಾರಿಗಳನ್ನೊಳಗೊಂಡ ಸಮಿತಿಯನ್ನು ರಚಿಸಲಾಗಿದೆ. ಸಮಿತಿಯು ಎರಡು ಸಭೆಗಳನ್ನು ನಡೆಸಿದೆ. ಸಮಿತಿಯ ವರದಿಯನ್ನು ನಿರೀಕ್ಷಿಸಿದೆ. |

| | | |
|---|---|---|
| | ಸಲ್ಲಿಸಿದ್ದಲ್ಲಿ, ವರದಿಯ ಮುಖ್ಯಾಂಶಗಳೇನು; ಸಲ್ಲಿಸದಿದ್ದಲ್ಲಿ, ಯಾವ ಕಾಲಮಿತಿಯೊಳಗೆ ಸಲ್ಲಿಸಲಾಗುವುದು? | |

ಆಇ 133 ಪಿಇಎನ್ 2020

(ಬಿ.ಎಸ್. ಯಡಿಯೂರಪ್ಪ)
ಮುಖ್ಯಮಂತ್ರಿ